ಆಕಾಶವಾಣಿ 5.12.2024
ಪ್ರದೇಶ ಸಮಾಚಾರ ಮಧ್ಯಾಹ್ನ 12 ಕ್ಕೆ

ಓದುತ್ತಿರುವವರು ರವಿ ಕುಲಕರ್ಣಿ ಗುರುವಾರ

1. ರಾಜ್ಯದಲ್ಲಿ ವಿಲೇವಾರಿಗೆ ಬಾಕಿ ಇರುವ ಬಗರ್‌ಹುಕುಂ ಅರ್ಜಿಗಳನ್ನು ಮುಂದಿನ ಆರು ತಿಂಗಳಲ್ಲಿ ಆಂದೋಲನ ಮಾದರಿಯಲ್ಲಿ ವಿಲೇವಾರಿ ಮಾಡಲಾಗುವುದು ಎಂದು ಕಂದಾಯ ಸಚಿವ ಕೃಷ್ಣ ಬೈರೇಗೌಡ ತಿಳಿಸಿದ್ದಾರೆ. ಶಿರಸಿಯ ಅಂಬೇಡ್ಕರ್ ಭವನದಲ್ಲಿ ನಿನ್ನೆ ಫಲಾನುಭವಿಗಳಿಗೆ ಬಗರ್‌ಹುಕುಂ ಸಾಗುವಳಿ ಚೀಟಿ, ಪಹಣಿಪತ್ರಿಕೆ, ಪೋಡಿ ದಾಖಲೆ, ಕಂದಾಯ ಗ್ರಾಮಗಳ ಹಕ್ಕುಪತ್ರ ವಿತರಿಸಿ ಮಾತನಾಡಿದ ಅವರು, ರಾಜ್ಯದಲ್ಲಿ ಅರಣ್ಯ ಹೊರತುಪಡಿಸಿ ಸುಮಾರು ವರ್ಷಗಳಿಂದ ಸರಕಾರಿ ಹಾಗೂ ಖಾಸಗಿ ಜಮೀನಿನಲ್ಲಿ ಮನೆ ಕಟ್ಟಿಕೊಂಡು ಊರಾಗಿ ಬೆಳೆದು, ದಾಖಲೆಯಲ್ಲಿ ಗ್ರಾಮವಾಗದ ತಾಂಡಾ, ಹಟ್ಟಿಗಳನ್ನು ಕಂದಾಯ ಗ್ರಾಮಗಳನ್ನಾಗಿ ಪರಿವರ್ತಿಸಲಾಗುವುದು. ತ್ರಿಶಂಕು ಸ್ಥಿತಿಯಲ್ಲಿರುವ 3800 ತಾಂಡಾ, ಹಟ್ಟಿ ವಸತಿ ಪ್ರದೇಶಗಳಲ್ಲಿ ವಾಸಿಸುವ 1.5 ಲಕ್ಷ ಕುಟುಂಬಗಳಿಗೆ ಶಾಶ್ವತ ಹಕ್ಕುಪತ್ರ ನೀಡಲಾಗುವುದು ಎಂದು ತಿಳಿಸಿದರು. (ಉ.ಕ–09)

2. ಮೈಸೂರಿನ ಕರ್ನಾಟಕ ಸಾಬೂನು ಮತ್ತು ಮಾರ್ಜಕ ನಿಯಮಿತ ಸಂಸ್ಥೆ– K.S.D.L ಪ್ರಸಕ್ತ ಆರ್ಥಿಕ ವರ್ಷದಲ್ಲಿ, 1,500 ಕೋಟಿ ರೂಪಾಯಿ ವಹಿವಾಟು ನಡೆಸಿದ್ದು, 360 ಕೋಟಿ ರೂಪಾಯಿ ನಿವ್ವಳ ಲಾಭ ಗಳಿಸಿದೆ ಎಂದು, ಕೈಗಾರಿಕಾ ಖಾತೆ ಸಚಿವ ಎಂ.ಬಿ.ಪಾಟೀಲ ತಿಳಿಸಿದ್ದಾರೆ. ಈ ಕುರಿತು ಸಾಮಾಜಿಕ ಜಾಲತಾಣ ಎಕ್ಸ್ ನಲ್ಲಿ ಮಾಹಿತಿ ನೀಡಿರುವ ಅವರು, ಆನ್‌ಲೈನ್ ಮಾರುಕಟ್ಟೆ ತಾಣಗಳ ಜೊತೆಗೆ, ದೇಶ ವಿದೇಶಗಳಿಗೂ ಸಂಸ್ಥೆಯ ಉತ್ಪನ್ನಗಳನ್ನು ವಿಸ್ತರಿಸಲಾಗಿದೆ. 2030 ರ ವೇಳೆಗೆ 8 ಸಾವಿರ ಕೋಟಿ ರೂಪಾಯಿ ವಹಿವಾಟಿನ ಗುರಿ ಹೊಂದಲಾಗಿದೆ ಎಂದು ಸಚಿವರು ತಿಳಿಸಿದ್ದಾರೆ.

3. ಜಇಂದು, ವಿಶ್ವ ಮಣ್ಣು ದಿನಾಚರಣೆ. ಮಣ್ಣು ಪ್ರತಿ ಜೀವ ಸಂಕುಲಕ್ಕೂ ಅತ್ಯಗತ್ಯ. "ಮಣ್ಣಿನ ಆರೈಕೆ" ಈ ವರ್ಷದ ಧ್ಯೇಯವಾಗಿದ್ದು, ರಾಜ್ಯದ ವಿವಿಧೆಡೆ ಮಣ್ಣಿನ ಫಲವತ್ತತೆ ಕಾಯ್ದುಕೊಳ್ಳುವ ಕುರಿತಂತೆ ಜಾಗೃತಿ ಮೂಡಿಸಲು ಜಾಥಾ, ರ್‍ಯಾಲಿ, ಉಪನ್ಯಾಸ ಕಾರ್ಯಕ್ರಮ ಸೇರಿದಂತೆ ಹಲವು ವಿಧಾಯಕ ಕಾರ್ಯಕ್ರಮಗಳನ್ನು ನಡೆಸಲಾಗುತ್ತಿದೆ. ವಿಶ್ವದ ಎಲ್ಲೆಡೆ ಶೇಕಡ 33 ರಷ್ಟು ಮಣ್ಣಿನ ಫಲವತ್ತತೆ ಕುಸಿದಿದ್ದು, 2050ಕ್ಕೆ ಶೇಕಡ 50 ರಷ್ಟು ಕುಸಿಯಲಿದೆ ಎಂದು ಅಂದಾಜಿಸಲಾಗಿದೆ. ಕರ್ನಾಟಕದಲ್ಲಿ 5 ಲಕ್ಷ ಹೆಕ್ಟರ್ ಪ್ರದೇಶ, ಜವುಳು ಮತ್ತು ಕ್ಷಾರಯುಕ್ತ, ಸಮಸ್ಯಾತ್ಮಕ ಮಣ್ಣಾಗಿದ್ದು, ಬೆಳೆಗಳನ್ನು ಬೆಳೆಯಲು ನಿರುಪಯುಕ್ತವಾಗಿ, ಪರಿಣಮಿಸಿದೆ.

4. ಕಾಂಗ್ರೆಸ್‌ನ ಸ್ವಾಭಿಮಾನಿ ಒಕ್ಕೂಟಗಳ ಜಂಟಿ ಆಶ್ರಯದಲ್ಲಿ ಹಾಸನದಲ್ಲಿ ಇಂದು ಜನ ಕಲ್ಯಾಣ ಸಮಾವೇಶ ನಡೆಯಲಿದ್ದು, ಸಮಾವೇಶದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಕೆ.ಜೆ.ಜಾರ್ಜ್, ಪ್ರಿಯಾಂಕ್ ಖರ್ಗೆ, ಎಚ್.ಸಿ.ಮಹಾದೇವಪ್ಪ, ಮುನಿಯಪ್ಪ,

ಸತೀಶ್ ಜಾರಕಿಹೊಳಿ ಸೇರಿದಂತೆ ಸಚಿವ ಸಂಪುಟದ ಬಹುತೇಕ ಸಚಿವರು ಭಾಗಿಯಾಗಲಿದ್ದಾರೆ. ಸಮಾವೇಶದಲ್ಲಿ ಹಾಸನ, ಮಂಡ್ಯ, ಮೈಸೂರು, ಚಾಮರಾಜನಗರ, ಕೊಡಗು, ಚಿಕ್ಕಮಗಳೂರು ಜಿಲ್ಲೆಗಳಿಂದ ಸುಮಾರು ಎರಡು ಲಕ್ಷ ಜನ ಬಾಗಿಯಾಗುವ ನಿರೀಕ್ಷೆ ಇದೆ. ಪೊಲೀಸ್ ಇಲಾಖೆಯಿಂದ ಅಗತ್ಯ ಭದ್ರತೆ ವ್ಯವಸ್ಥೆಗಳನ್ನು ಮಾಡಲಾಗಿದೆ. (12)

5. ರೈಲುಗಳ ವೇಗ ಹೆಚ್ಚಿಸಲು ಬೆಂಗಳೂರು–ಜೋಲಾರ್ ಪೇಟೆ ಭಾಗದಲ್ಲಿ ನೈಋತ್ಯ ರೈಲ್ವೆ ಬೆಂಗಳೂರು ವಿಭಾಗ ಇಂದು ಈ ಭಾಗದಲ್ಲಿ ವೇಗ ಪರೀಕ್ಷೆ ನಡೆಸಲಿದ್ದು, ಸಾರ್ವಜನಿಕರು ರೈಲ್ವೆ ಹಳಿಗಳ ಬಳಿ ಅತಿಕ್ರಮ ಪ್ರವೇಶ ಮಾಡಬಾರದು. ನಿಲ್ದಾಣಗಳ ಪ್ಲಾಟ್‌ಫಾರ್ಮ್‌ಗಳಲ್ಲಿ ಹಳಿಗಳಿಂದ ಸುರಕ್ಷಿತ ಅಂತರ ಕಾಯ್ದುಕೊಳ್ಳಬೇಕು ಎಂದು ಪ್ರಕಟಣೆಯಲ್ಲಿ ತಿಳಿಸಿದೆ. (ಬೆಂ.ನ–22).

6. ಬಳ್ಳಾರಿಯ ಜಿಲ್ಲಾಸ್ಪತ್ರೆ ಮತ್ತು ಬಿಮ್ಸ್‌ನಲ್ಲಿ ಇತ್ತೀಚೆಗೆ, ನಾಲ್ವರು ಬಾಣಂತಿಯರ ಸಾವು ಪ್ರಕರಣದ ಹಿನ್ನೆಲೆ, ಜೆ.ಡಿ.ಎಸ್. ರಾಜ್ಯ ನಿಯೋಗ ಭೇಟಿ ನೀಡಿತು. ಶೈಶವಾವಸ್ಥೆ ಮಕ್ಕಳ ಭವಿಷ್ಯಕ್ಕಾಗಿ, ತಲಾ 25 ಲಕ್ಷ ರೂಪಾಯಿ ಪರಿಹಾರ ನೀಡುವಂತೆ, ನಿಯೋಗ ರಾಜ್ಯ ಸರ್ಕಾರವನ್ನು ಒತ್ತಾಯಿಸಿದೆ. (09)

7. ಕೋಲಾರ ಚಿನ್ನದ ಗಣಿ ಪ್ರದೇಶದಲ್ಲಿ, ಇಂಟಿಗ್ರೇಟೆಡ್ ಟೌನ್ ಶಿಪ್ ನಿರ್ಮಿಸಲು, ನಗರಾಭಿವೃದ್ಧಿ ಮತ್ತು ನಗರ ಯೋಜನೆ ಖಾತೆ ಸಚಿವ, ಬಿ.ಎಸ್.ಸುರೇಶ ಅಧ್ಯಕ್ಷತೆಯಲ್ಲಿ ನಿನ್ನೆ ಸಭೆ ನಡೆಯಿತು. (14)

8. ಭಾರತೀಯ ವಾಣಿಜ್ಯ ಮಂಡಳಿ ಸಹಯೋಗದೊಂದಿಗೆ, ಬಿಹಾರ ಸರ್ಕಾರ, ಬೆಂಗಳೂರಿನ ಅರಮನೆ ಮೈದಾನದಲ್ಲಿ, ನಾಳೆ ಮತ್ತು ನಾಡಿದ್ದು, ಮಖಾನಾ ಮಹೋತ್ಸವ ಆಯೋಜಿಸಿದೆ. ಬೆಳಗ್ಗೆ 11:30 ರಿಂದ ಸಾರ್ವಜನಿಕರು ಭೇಟಿ ನೀಡಬಹುದು. 'ನರಿ ನಟ್ಸ್' ಎನ್ನಲಾಗುವ ಮಖಾನಾ, ಬಿಹಾರದ ಪ್ರಮುಖ ಕೃಷಿ ಉತ್ಪನ್ನವಾಗಿದ್ದು, ಪೌಷ್ಟಿಕಾಂಶಯುಕ್ತ ಮಖಾನಾ, ವಿಶೇಷವಾಗಿ ಮಿಥಿಲಾ ಪ್ರದೇಶದಲ್ಲಿ ಹೆಚ್ಚು ಬೆಳೆಯಲಾಗುತ್ತದೆ.

9. ಕನ್ನಡ ಸಾಹಿತ್ಯ ಪರಿಷತ್ ರಾಜ್ಯಾಧ್ಯಕ್ಷ ಮಹೇಶ ಜೋಶಿ ಅವರು ಇಂದು ಧಾರವಾಡಕ್ಕೆ ಭೇಟಿ ನೀಡಲಿದ್ದು, ಮಂಡ್ಯದಲ್ಲಿ ನಡೆಯಲಿರುವ 87 ನೇ ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನಕ್ಕೆ ಪ್ರಮುಖ ಸಾಹಿತಿಗಳಿಗೆ ಆವ್ಹಾನ ನೀಡಲಿದ್ದಾರೆ.

10. ಗದಗಿನ ತೋಂಟದಾರ್ಯ ಮಠದ ಶಿವಾನುಭವ ಮಂಟಪದಲ್ಲಿ, 'ಸಂತ ರಾಜಕಾರಣಿ ಡಿ.ಆರ್. ಪಾಟೀಲ' ಗ್ರಂಥವನ್ನು, ಗಾಂಧಿ ಸ್ಮಾರಕ ನಿಧಿ ಅಧ್ಯಕ್ಷ, ವೂಡೆ ಪಿ. ಕೃಷ್ಣ ಬಿಡುಗಡೆ ಮಾಡಿದರು. (11)

10. ಕೋಲಾರ ಜಿಲ್ಲೆಯಾದ್ಯಂತ, ಕ್ಷಯ ರೋಗ ನಿಯಂತ್ರಿಸಲು, ನಿಕ್ಷಯ್ ಪೋಷಣ್ ಮತ್ತು ನಿಕ್ಷಯ್ ಮಿತ್ರ ಯೋಜನೆನ್ನು, ಎಲ್ಲಾ ಕೇಂದ್ರಗಳಲ್ಲಿ ಜಾರಿ ಗೊಳಿಸಲಾಗಿದೆ ಎಂದು, ಜಿಲ್ಲಾಧಿಕಾರಿ ತಿಳಿಸಿದ್ದಾರೆ. (12)

ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು.

ನಮ್ಮ ಮುಂದಿನ ರಾಷ್ಟ್ರೀಯ ವಾರ್ತಾ ಪ್ರಸಾರ ಮಧ್ಯಾಹ್ನ 1 ಗಂಟೆ 10 ನಿಮಿಷಕ್ಕೆ..